# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ – ೧<br>**Part – I** | ಬೆಂಗಳೂರು, **ಗುರುವಾರ**, ೧೮ ಸೆಪ್ಟೆಂಬರ್, ೨೦೨೫ (**ಭಾದ್ರಪದ** ೨೭, ಶಕವರ್ಷ ೧೯೪೭)<br>**BENGALURU, THURSDAY, 18 SEPTEMBER, 2025 (BHADRAPADA 27, SHAKAVARSHA 1947)** | ನಂ. ೫೯೮<br>**No. 598** |
|---|---|---|

## <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:-** ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿಗಾಗಿ ಪ್ರತ್ಯೇಕ ಇಲಾಖೆ ಸೃಜಿಸುವ ಬಗ್ಗೆ.

**ಪ್ರಸ್ತಾವನೆ:**

ದಿನಾಂಕ:17.09.2024ರಂದು ಕಲಬುರಗಿಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿಗಾಗಿ ಕೆಲಸಗಳನ್ನು ಇನ್ನೂ ಹೆಚ್ಚಿನ ಪರಿಣಾಮಕಾರಿಯಾಗಿ ಜಾರಿಗೊಳಿಸಲು ಮತ್ತು ಅಭಿವೃದ್ಧಿ ಕಾಮಗಾರಿಗಳ ಮೇಲುಸ್ತುವಾರಿ ಮಾಡಲು ಒಂದು ಪ್ರತ್ಯೇಕ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಸಚಿವಾಲಯವನ್ನು ಸ್ಥಾಪಿಸಲು ಸಚಿವ ಸಂಪುಟವು ನಿರ್ಧರಿಸಲಾಗಿರುತ್ತದೆ. ಮುಂದುವರೆದು, ಕಾಮಗಾರಿಗಳನ್ನು ಅನುಷ್ಠಾನಗೊಳಿಸುವಲ್ಲಿ ಸಿಬ್ಬಂದಿಗಳ ಕೊರತೆ ಇರುವ ಕಾರಣ ಸದರಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಹಾಗೂ ಆ ಪ್ರದೇಶ 7 ಜಿಲ್ಲಾಧಿಕಾರಿಗಳ ಕಚೇರಿಗಳಿಗೆ ಹೆಚ್ಚುವರಿ ಹುದ್ದೆಗಳನ್ನು ಮಂಜೂರು ಮಾಡಿ ಬಲಪಡಿಸಲು ಸಹ ನಿರ್ಧರಿಸಲಾಗಿರುತ್ತದೆ.

ದಿನಾಂಕ: 16.09.2025 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿಗಾಗಿ ಪ್ರತ್ಯೇಕ ಇಲಾಖೆಯನ್ನು ಸೃಜಿಸಲು ನಿರ್ಣಯಿಸಲಾಗಿರುತ್ತದೆ.

ಮೇಲಿನ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಆದೇಶಿಸಿದೆ.

### <u>ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 436 ಸಲುಸೇ 2025,</u>
### <u>ಬೆಂಗಳೂರು, ದಿನಾಂಕ: 16.09.2025.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿಗಾಗಿ ಪ್ರತ್ಯೇಕ ಇಲಾಖೆಯನ್ನು ಸೃಜಿಸಿ ಆದೇಶಿಸಿದೆ. ಸದರಿ ಇಲಾಖೆಯು ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರ ಅಧೀನದಲ್ಲಿ ಕಾರ್ಯನಿರ್ವಹಿಸುವುದು.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಕಾರ್ಯದರ್ಶಿಯವರು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಇಲಾಖೆಯ ಕಾರ್ಯದರ್ಶಿಯಾಗಿರುತ್ತಾರೆ. ಕಲ್ಯಾಣ ಕರ್ನಾಟಕ

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ಪ್ರದೇಶಾಭಿವೃದ್ಧಿ ಮಂಡಳಿಯ ಎಲ್ಲಾ ಅಧಿಕಾರಿ ಸಿಬ್ಬಂದಿಗಳನ್ನೊಳಗೊಂಡ ಇಲಾಖೆಯು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮತ್ತು ಅನುಚ್ಛೇದ 371(ಜೆ) ಗೆ ಸಂಬಂಧಿಸಿದ ವಿಷಯಗಳನ್ನು ನಿರ್ವಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಕೆ.ವಿ. ಅಶೋಕ)**
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ
(ಸೇವೆಗಳು-6)(ಪ್ರ)

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH